**ದಿನಾಂಕ 11.08.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

**ವಾದಿಯ ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಪಿ ಜೆ ಆರ್ ವಕೀಲರಿಂದ**

**ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.**

**ನನ್ನ ಮುಂದುವರಿದ ಮುಖ್ಯ ವಿಚಾರಣೆಯ ಸಲುವಾಗಿ ನ್ಯಾಯಾಲಯಕ್ಕೆ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ನಿಶಾನೆಗಳನ್ನಾಗಿ ಗುರುತಿಸಬೇಕೆಂದು ಕೋರಿಕೊಳ್ಳುತ್ತೇನೆ.**

1. ದಾವಾಸ್ವತ್ತುಗಳಿಗೆ ಸಂಬಂಧಿಸಿದಂತೆ ನಾಲ್ಕು ಆರ್ ಟಿ ಸಿ ಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ **ನಿಪಿ-1 ರಿಂದ ನಿಪಿ-4** ಎಂದು ಗುರುತಿಸಲಾಯಿತು.
2. ದಿನಾಂಕ 29.04.2017 ರಂದು ಪ್ರತಿವಾದಿಯರಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು **ನಿಪಿ-5** ಎಂದು ಗುರುತಿಸಲಾಯಿತು.
3. ಸದರಿ ನಿಪಿ-5 ನೋಟಿಸನ್ನು ಪ್ರತಿವಾದಿಯರಿಗೆ ನೋಂದಾಯಿತ ಅಂಚೆ ಮೂಲಕ ಕಳುಹಿಸಿದ್ದು ಈ ಬಗ್ಗೆ ಮೂರು ಅಂಚೆ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ **ನಿಪಿ-6 ರಿಂದ ನಿಪಿ-8** ಎಂದು ಗುರುತಿಸಲಾಯಿತು.
4. ನಿಪಿ-5 ನೋಟಿಸು ಪ್ರತಿವಾದಿ 1 ರಿಂದ 3 ರವರಿಗೆ ಜಾರಿಯಾದ ಬಗ್ಗೆ ಮೂರು ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ **ನಿಪಿ-9 ರಿಂದ ನಿಪಿ-11** ಎಂದು ಗುರುತಿಸಲಾಯಿತು.
5. ದಿನಾಂಕ 02.09.2017 ರಂದು 3ನೇ ಪ್ರತಿವಾದಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು **ನಿಪಿ-12** ಎಂದು ಗುರುತಿಸಲಾಯಿತು.
6. ಸದರಿ ನಿಪಿ-11 ನೋಟಿಸನ್ನು 3ನೇ ಪ್ರತಿವಾದಿಗೆ ನೋಂದಾಯಿತ ಅಂಚೆ ಮೂಲಕ ಕಳುಹಿಸಿದ್ದು ಈ ಬಗ್ಗೆ ಅಂಚೆ ರಶೀದಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು **ನಿಪಿ-13** ಎಂದು ಗುರುತಿಸಲಾಯಿತು.
7. ನಿಪಿ-11 ನೋಟಿಸು 3ನೇ ಪ್ರತಿವಾದಿಗೆ ಜಾರಿಯಾದ ಬಗ್ಗೆ ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು **ನಿಪಿ-14** ಎಂದು ಗುರುತಿಸಲಾಯಿತು.

8. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಲೋಕೋಪಯೋಗಿ ಇಲಾಖೆ ರವರು ನೀಡಿದ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು **ನಿಪಿ-15** ಎಂದು ಗುರುತಿಸಲಾಯಿತು.

**ಮುಂದುವರಿದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು,
ಬಂಟ್ವಾಳ, ದ.ಕ.